ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಶಿಕ್ಷಕರಿಗೆ ವಿಶೇಷ ಭತ್ಯೆ ನೀಡುವ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

526(696) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ:01.08.2008ರ ನಂತರ ನೇರ ನೇಮಕಾತಿ ಹೊಂದಿದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲಾ ಶಿಕ್ಷಕರೆಷ್ಟು ; ಅನುದಾನಿತ ಪದವಿ ಪೂರ್ವ ಉಪನ್ಯಾಸಕರು ಎಷ್ಟು ;

(ಆ) ಸದರಿ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ವಿಶೇಷ ಭತ್ಯೆ ಮಂಜೂರಾಗದೆ, ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈಗಾಗಲೇ ಸದರಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಮಂಜೂರಾಗಿರುವ ವಿಶೇಷ ಭತ್ಯೆಯನ್ನು ವಸೂಲು ಮಾಡುವಂತೆ ಸರ್ಕಾರ ಆದೇಶಿಸಿರುವುದು ಸಮಂಜಸವೇ ;

(ಈ) ಘನತೆವೆತ್ತ ನ್ಯಾಯಾಲಯ ಮತ್ತು ಕರ್ನಾಟಕ ಮೇಲ್ಮನವಿ ನ್ಯಾಯಮಂಡಳಿಯಿಂದ ದಿನಾಂಕ:01.08.2008ರ ನಂತರ ನೇಮಕಾತಿಗೊಂಡ ಶಿಕ್ಷಕರು ಹಾಗೂ ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆ ನೀಡುವುದು ಸಮಂಜಸವೆಂದು ತಿಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರವು ಸದರಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಮಂಜೂರಾಗಿರುವ ವಿಶೇಷ ಭತ್ಯೆಯನ್ನು ಯಾವಾಗಿನಿಂದ ಮುಂದುವರೆಸಲಾಗುವುದು; (ಪೂರ್ಣ ಮಾಹಿತಿ ನೀಡುವುದು)

(ಊ) ವಿಶ್ವವಿದ್ಯಾಲಯ ಕಾಲೇಜುಗಳಲ್ಲಿ ಬೋಧನೆ ಮಾಡಿದ ಅತಿಥಿ ಉಪನ್ಯಾಸಕರಿಗೆ ಲಾಕ್‌ಡೌನ್ ಸಮಯದಲ್ಲಿ ಗೌರವಧನ ನೀಡಲಾಗಿದೆಯೇ ;

(ಋ) ನೀಡಿದ್ದಲ್ಲಿ, ಎಷ್ಟು ಹಣ ನೀಡಲಾಗಿದೆ; ಬಿಡುಗಡೆಯಾದ ಅನುದಾನ ಎಷ್ಟು ? (ಕಾಲೇಜುವಾರು/ವಿಶ್ವವಿದ್ಯಾಲಯವಾರು ವಿವರ ನೀಡುವುದು)